## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1271 |
| ಸದಸ್ಯರ ಹೆಸರು | : | ಶ್ರೀಮತಿ ಬಲ್ಕೀಸ್ ಬಾನು<br>(ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 19.12.2024 |
| ಉತ್ತರಿಸುವ ಸಚಿವರು | : | ಗೃಹ ಸಚಿವರು |

<table>
<tr><th>ಕ್ರ.ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಇತ್ತೀಚಿನ ದಿನಗಳಲ್ಲಿ ಆನ್‌ಲೈನ್ ಗೇಮ್ ಆಡುವವರ ಸಂಖ್ಯೆ ಜಾಸ್ತಿ ಆಗುತ್ತಿದ್ದು, ಇಂದಿನ ಯುವಕರು ಆನ್‌ಲೈನ್ ಗೇಮ್ ಗೆ ಅಡಿಕ್ಟ್ ಆಗಿ ತಮ್ಮ ಜೀವನವನ್ನೇ ಹಾಳು ಮಾಡಿಕೊಳ್ಳುತ್ತಿದ್ದು, ಈ ರೀತಿಯ ಆಟಗಳ ಗೀಳಿಗೆ ಬಿದ್ದು ಹಲವರು ತಮ್ಮ ಜೀವನವನ್ನೇ ಕಳೆದುಕೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;</td><td rowspan="2">ಆನ್‌ಲೈನ್ ಗೇಮ್‌ಗಳಿಂದ ಹಣ ಕಳೆದುಕೊಂಡು ಆತ್ಮಹತ್ಯೆಗೆ ಶರಣಾಗಿರುವವರ ಸಂಖ್ಯೆ ಈ ಕೆಳಗಿನಂತಿದೆ:-<br><table>
<tr><th>ಕ್ರ. ಸಂ.</th><th>ಘಟಕ</th><th>ಆತ್ಮಹತ್ಯಗೆ ಶರಣಾದವರ ಸಂಖ್ಯೆ</th></tr>
<tr><td>1</td><td>ಬೆಂಗಳೂರು ನಗರ</td><td>5</td></tr>
<tr><td>2</td><td>ವಿಜಯನಗರ</td><td>1</td></tr>
<tr><td></td><td>ಒಟ್ಟು</td><td>6</td></tr>
</table></td></tr>
<tr><td>ಆ)</td><td>ರಾಜ್ಯದಲ್ಲಿ ಕಳೆದ 3 ವರ್ಷಗಳಲ್ಲಿ ಆನ್‌ಲೈನ್ ಗೇಮ್ ಗಳಿಂದ ಹಣ ಕಳೆದುಕೊಂಡು ಆತ್ಮಹತ್ಯೆ ಪ್ರಯತ್ನ ಹಾಗೂ ಆತ್ಮಹತ್ಯೆ ಮಾಡಿಕೊಂಡಿರುವವರ ಸಂಖ್ಯೆ ಎಷ್ಟು;</td></tr>
<tr><td>ಇ)</td><td>ಆನ್‌ಲೈನ್ ಗೇಮ್ ಬ್ಯಾನ್ ಮಾಡಲು ಅಥವಾ ನಿಯಂತ್ರಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ? (ವಿವರ ನೀಡುವುದು)</td><td>ಆನ್‌ಲೈನ್ ಗೇಮ್‌ಗಳನ್ನು ನಿರ್ಬಂಧಿಸುವ ಕುರಿತಂತೆ ಕರ್ನಾಟಕ ಪೊಲೀಸ್ ಕಾಯ್ದೆ, 1963ರ ಕಲಂ. 78, 79, 80, 87, 114, 128ಎ ಹಾಗೂ 176 ಗಳಿಗೆ ಕೆಲವು ತಿದ್ದುಪಡಿಯನ್ನು The Karnataka Police (Amendment) Act, 2000 (Central Act 21 of 2000) ರಲ್ಲಿ ಮಾಡಲಾಗಿತ್ತು. ಈ ತಿದ್ದುಪಡಿಯನ್ನು ಪ್ರಶ್ನಿಸಿ ಆನ್‌ಲೈನ್ ಗೇಮ್ ಸಂಸ್ಥೆಗಳು ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು ಇಲ್ಲಿ W.P.No.18703/2021 (GM-Police) ನ್ನು ದಾಖಲಿಸಿದ್ದು, ಮಾನ್ಯ ಉಚ್ಚ ನ್ಯಾಯಾಲಯವು ಸರ್ಕಾರವು ಮಾಡಿದ ತಿದ್ದುಪಡಿಯನ್ನು ದಿನಾಂಕ:14.02.2022ರಂದು ರದ್ದುಗೊಳಿಸಿರುತ್ತದೆ. ಮಾನ್ಯ ಉಚ್ಚ ನ್ಯಾಯಾಲಯದ ಆದೇಶವನ್ನು ಪ್ರಶ್ನಿಸಿ ಸರ್ಕಾರವು ಮಾನ್ಯ ಸರ್ವೋಚ್ಚ ನ್ಯಾಯಾಲಯದಲ್ಲಿ Civil Appeal No.6132/2023 ನ್ನು ದಾಖಲಿಸಿದ್ದು, ಪ್ರಕರಣವು ಬಾಕಿಯಿರುತ್ತದೆ.</td></tr>
</table>

ಸಂಖ್ಯೆ: ಹೆಚ್‌ಡಿ 644 ಎಸ್‌ಎಸ್‌ಟಿ 2024

**(ಡಾ: ಜಿ. ಪರಮೇಶ್ವರ)**
ಗೃಹ ಸಚಿವರು